ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 13/10/2020

# ಬಿಎಸ್‌ವೈ-ಎಚ್‌ಡಿಕೆ ಗುಪ್ ಗುಪ್ ಟಾಕ್

ಉದಯ 13/10/20

## । ಕುಮಾರಸ್ವಾಮಿ ಮಾತಿಗೆ ಇಲ್ಲ ಎನ್ನದ ಸಿಎಂ

• ಎಸ್.ಲಕ್ಷ್ಮಿನಾರಾಯಣ

ಬೆಂಗಳೂರು: ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನಡುವಿನ ಸಂಬಂಧ ಮತ್ತಷ್ಟು ಗಟ್ಟಿಯಾಗುತ್ತಿದ್ದು 'ಫೋನ್‌ಇನ್' ವರೆಗೆ ವೃದ್ಧಿಸಿದೆ.

ಅಷ್ಟೇ ಅಲ್ಲ, ಎಚ್.ಡಿ.ಕುಮಾರಸ್ವಾಮಿ ಟ್ವೀಟ್ ಮೂಲಕ ಪ್ರಸ್ತಾಪಿಸುವ ವಿಚಾರಗಳಿಗೆ ಮುಖ್ಯಮಂತ್ರಿ ಯಡಿಯೂರಪ್ಪ ತಕ್ಷಣ ಸ್ಪಂದಿಸಿ ಆದೇಶ ಹೊರಡಿಸುವ ಮಟ್ಟದಲ್ಲಿ ಇಬ್ಬರ ಬಾಂಧವ್ಯ ಸುಧಾರಣೆಯಾಗಿದೆ.

ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಜತೆ ವಾಕ್ಸಮರಕ್ಕಿಳಿದಿರುವ ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಯಡಿಯೂರಪ್ಪ ಬಗ್ಗೆ 'ಸಾಫ್ಟ್' ಆಗಿದ್ದು ಸಮಸ್ಯೆ ಪ್ರಸ್ತಾಪಿಸಿ ಪರಿಹಾರ ಪಡೆದುಕೊಂಡು 'ಧಾರಾಳ'ವಾಗಿ ಕೃತಜ್ಞತೆಗಳನ್ನೂ ಸಲ್ಲಿಸುತ್ತಿದ್ದಾರೆ.

ಕಳೆದ ವಾರ ಮೂರ್‍ನಾಲ್ಕು ಬಾರಿ ಎಚ್.ಡಿ.ಕುಮಾರಸ್ವಾಮಿಯವರು ಯಡಿಯೂರಪ್ಪ ಅವರ ಜತೆ ದೂರವಾಣಿ ಮೂಲಕ ಮಾತನಾಡಿದ್ದಾರೆ. ಈ ಸಂದರ್ಭದಲ್ಲಿ ಕೆಲವು ರಾಜಕೀಯ ವಿಚಾರಗಳೂ ಚರ್ಚೆಗೆ ಬಂದಿವೆ ಎಂದು ವಿಶ್ವಸನೀಯ ಮೂಲಗಳು ತಿಳಿಸಿವೆ.

ಶಿರಾ ಹಾಗೂ ರಾಜರಾಜೇಶ್ವರಿನಗರ ಉಪ ಚುನಾವಣೆ ಹಾಗೂ ಎರಡು ಪದವೀಧರ ಹಾಗೂ ಎರಡು ಶಿಕ್ಷಕರ ಕ್ಷೇತ್ರದ ಚುನಾವಣೆ ಹೊತ್ತಲ್ಲಿ ಇಬ್ಬರೂ ಹತ್ತಿರ... ಹತ್ತಿರ... ವಾಗುತ್ತಿರುವ ಈ ವಿದ್ಯಮಾನ ರಾಜಕೀಯವಾಗಿ ಸಾಕಷ್ಟು ಕುತೂಹಲ ಮೂಡಿಸಿದೆ.

**ತಕ್ಷಣ ಸ್ಪಂದನೆ:** ವಿದ್ಯಾಗಮ ವಿಚಾರದಲ್ಲಿ ಕುಮಾರಸ್ವಾಮಿ ಟ್ವೀಟ್ ಮಾಡಿದ ತಕ್ಷಣ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಸ್ಥಗಿತದ ಆದೇಶ ಹೊರಡಿಸಿದರು. ಶಿಕ್ಷಕರ ಮಧ್ಯಂತರ ರಜೆ ರದ್ದು ವಿಚಾರದಲ್ಲಿ ಮಾಡಿದ ಟ್ವೀಟ್‌ಗೂ ಕೆಲವೇ ಗಂಟೆಗಳಲ್ಲಿ ಅ.12 ರಿಂದ 30 ರವರೆಗೆ ರಜೆ ಘೋಷಿಸಿದರು.

ಇದಾದ ನಂತರ ಎಚ್.ಡಿ.ಕುಮಾರಸ್ವಾಮಿಯವರು 'ನನ್ನ ಭಾವನೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಯಡಿಯೂರಪ್ಪ ಅವರಿಗೆ ಕೃತಜ್ಞತೆಗಳು. ಶಿಕ್ಷಕರ ವೃತ್ತಿ ಹಾಗೂ ಗೌರವಕ್ಕೆ ಸಮರ್ಪಿಸಿದ ಗುರುದಕ್ಷಿಣೆ' ಎಂದು ಟ್ವೀಟ್ ಮಾಡಿದ್ದಾರೆ.

ಎಚ್.ಡಿ.ಕುಮಾರಸ್ವಾಮಿಯವರು ಪ್ರಸ್ತಾಪಿಸಿರುವ ಖಾಸಗಿ ಹಾಗೂ ಅನುದಾನಿತ ಶಾಲಾ-ಕಾಲೇಜು ಶಿಕ್ಷಕರ ವೇತನ ವಿಚಾರದಲ್ಲಿಯೂ ಒಂದೆರಡು ದಿನಗಳಲ್ಲಿ ಹಣಕಾಸು ಇಲಾಖೆಯ ಜತೆ ಮಾತುಕತೆ ನಡೆಸಿ ಆದೇಶ ಹೊರಡಿಸುವ ಭರವಸೆಯನ್ನೂ ಯಡಿಯೂರಪ್ಪ ನೀಡಿದ್ದಾರೆ ಎಂದೂ ಹೇಳಲಾಗಿದೆ.

ವಿಧಾನಮಂಡಲ ಅಧಿವೇಶನದಲ್ಲೂ ಭೂ ಸುಧಾರಣೆ ತಿದ್ದುಪಡಿ ವಿಧೇಯಕ ಚರ್ಚೆ, ಅವಿಶ್ವಾಸ ನಿರ್ಣಯ ಮಂಡನೆ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಮುಗಿಬಿದ್ದರೂ ಜೆಡಿಎಸ್ ಮೌನ ವಹಿಸಿತ್ತು. ಭೂ ಸುಧಾರಣೆ ವಿಧೇಯಕ ವಿಚಾರದಲ್ಲಿ ಕಾಂಗ್ರೆಸ್ ಸಭಾತ್ಯಾಗ ಮಾಡಿದರೂ ಕುಮಾರಸ್ವಾಮಿ ಸದನದಲ್ಲೇ ಇದ್ದು ಬೆಂಬಲ ವ್ಯಕ್ತಪಡಿಸಿದ್ದರು.





### ಯಾವುದಕ್ಕೆ ಸ್ಪಂದನೆ?

- ವಿದ್ಯಾಗಮ ಶಿಕ್ಷಣವು ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ಮಾರಕವಾಗಿದೆ ಎಂದು ಕುಮಾರಸ್ವಾಮಿ ಟ್ವೀಟ್. ಇದರ ಬೆನ್ನಲ್ಲೇ ವಿದ್ಯಾಗಮ ತಾತ್ಕಾಲಿಕ ಸ್ಥಗಿತಕ್ಕೆ ಮುಖ್ಯಮಂತ್ರಿ ಯಡಿಯೂರಪ್ಪ ನಿರ್ದೇಶನ.
- ಅ.1 ರಿಂದ 26 ರವರೆಗೆ ಇದ್ದ ಶಿಕ್ಷಕರ ಮಧ್ಯಂತರ ರಜೆ ರದ್ದುಪಡಿಸಿದ್ದು ಸರಿಯಲ್ಲ ಎಂದು ಭಾನುವಾರ ಕುಮಾರಸ್ವಾಮಿ ಟ್ವೀಟ್. ರಜಾದಿನವಾಗಿದ್ದರೂ ತಕ್ಷಣವೇ ಅ.12ರಿಂದ 30 ರವರೆಗೆ ಶಿಕ್ಷಕರಿಗೆ ದಸರಾ ರಜೆ ನೀಡಿ ಯಡಿಯೂರಪ್ಪ ಆದೇಶ.

### ವಾರದಲ್ಲಿ 4 ದಿನ ಫೋನ್ ಸಂಭಾಷಣೆ

ವಿಧಾನಮಂಡಲ ಅಧಿವೇಶನಕ್ಕೂ ಮುನ್ನ ಹಾಗೂ ಅಧಿವೇಶನದಲ್ಲಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ಕಾಂಗ್ರೆಸ್ ನಾಯಕರು ರಾಜ್ಯ ಸರ್ಕಾರದ ವಿರುದ್ಧ ಮುಗಿಬಿದ್ದಿದ್ದ ಬೆನ್ನಲ್ಲೇ ಉಭಯ ನಾಯಕರು ನಿರಂತರ ಸಂಪರ್ಕದಲ್ಲಿದ್ದಾರೆ. ವಾರದಲ್ಲಿ ನಾಲ್ಕು ದಿನ ಫೋನ್ ಮೂಲಕವೂ ಮಾತುಕತೆನಡೆಸುತ್ತಿದ್ದಾರೆಎಂದುಹೇಳಲಾಗುತ್ತಿದ್ದು, ಈ ಎಲ್ಲ ಬೆಳವಣಿಗೆಗಳು ರಾಜಕೀಯವಾಗಿ ಕುತೂಹಲ ಮೂಡಿಸಿವೆ.